OS. NO.241/2022
PW.1

ದಿನಾಂಕ:09.06.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯವಿಚಾರಣೆ:- ವಾದಿ ಪರ ವಕೀಲರಾದ ಶ್ರೀ ಕೆಎನ್ಎಂ ರವರಿಂದ:**

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ದಿನಾಂಕ.19.02.2005 ರ ನೊಂದಾಯಿತ ಕ್ರಯಪತ್ರದ ಮೂಲಪ್ರತಿಯನ್ನು ಹಾಜರು ಪಡಿಸಿದ್ದೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಸರ್ವೆ ನಂ. 208/3 ಜಮೀನಿಗೆ ಸಂಬಂಧಿಸಿದಂತೆ 2022-2023 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಪಟ್ಟಾ ಮತ್ತು ರಶೀದಿ ಪುಸ್ತಕವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ಒಂದು ಸೆಟ್ಲಮೆಂಟ್ ಅಕಾರ್ ಬಂದಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಒಂದು ಹಿಸ್ಸಾ ವೋಜಣಿಯ ಹಕ್ಕು ದಾಖಲೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಆಲಿಸಿ ನೀಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿ

(ರಾಧಾ ಎಸ್.)

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,

ಕನಕಪುರ